851(161) ಶ್ರೀ ಬಸವರಾಜು ಹೆಚ್ ಡಿ (ವಿರಾಜಪೇಟೆ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟುಉತ್ತರಿಸುವರೆ?

ಅ) ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಲವಾರು ಗ್ರಾಮಗಳಿಗೆ ಇದುವರೆವಿಗೂ ವಿದ್ಯುತ್ ಸಂಪರ್ಕ ಇಲ್ಲದೆಯಿರುವುದರಿಂದ ಸ್ಥಳೀಯ ಗ್ರಾಮಸ್ಥರು ತುಂಬಾ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ನದರಿ ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ,

ಇ) ಹಾಗಿದ್ದಲ್ಲಿ, ಇದಕ್ಕಾಗಿ ಸರ್ಕಾರ ಒದಗಿಸಿರುವ ಹಣವೆಷ್ಟು ಹಾಗೂ ಎಷ್ಟು ಸಮಯದಲ್ಲಿ ಈ ಯೋಜನೆಯನ್ನು ಕಾರ್ಯಗತ ಮಾಡಲಾಗುವುದು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂದನ ಸಚಿವರು)

ಅ) ಹೌದು ಬಂದಿರುತ್ತದೆ

ಆ) ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕ ಇಲ್ಲದಿರುವ ಗ್ರಾಮಗಳಿಗೆ, ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿಯಲ್ಲಿ ವಿದ್ಯುತ್ ಮೂಲಭೂತ ಸೌಕರ್ಯ ಕಲ್ಪಿಸಿ ಗ್ರಾಮಗಳ ವಿದ್ಯುದೀಕರಿಸುವ ಯೋಜನೆಗೆ ಮಂಜೂರಾತಿ ದೊರೆತಿರುತ್ತದೆ ಈ ಯೋಜನೆಯಡಿಯಲ್ಲಿ ವಿರಾಜಪೇಟೆ ವಿದಾನಸಭಾ ಕ್ಷೇತ್ರದ ಗ್ರಾಮಗಳೂ ಒಳಗೊಂಡಿರುತ್ತವೆ

ಇ) ಕೊಡಗು ಜಿಲ್ಲೆಯ, ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಗೆ ಕೇಂದ್ರ ಸರ್ಕಾರದಿಂದ 33 61 ಕೋಟಿ ರೂ ಗಳ ಮಂಜೂರಾತಿ ದೊರೆತಿರುತ್ತದೆ ನದರಿ ಕಾಮಗಾರಿಗಳಿಗೆ ಟೆಂಡರ ಕರೆಯಲಾಗಿದ್ದು, ಕಾಮಗಾರಿಯನ್ನು ಟೆಂಡರ್‌ದಾರರಿಗೆ ವಹಿಸಲು ಆದೇಶ ನೀಡುವ ಹಂತದಲ್ಲಿದೆ ಈ ಕಾಮಗಾರಿಗಳಲ್ಲಿ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಗ್ರಾಮಗಳೂ ಸಹ ಸೇರಿರುತ್ತವೆ ಕಾಮಗಾರಿಗಳನ್ನು ಪ್ರಾರಂಭಿಸಿದ ದಿನಾಂಕದಿಂದ ಒಂದು ವರ್ಷದೊಳಗೆ ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ